ಕರ್ನಾಟಕ ಸರ್ಕಾರ

**ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ**

**ಪತ್ರಿಕಾ ಪ್ರಕಟಣೆ** ದಿನಾಂಕ:07-11-2014

# "ಅನಿವಾಸಿ ಭಾರತೀಯರ ಬಂಡವಾಳ ಹೂಡಿಕೆಗೆ ವಿಶೇಷ ಸೌಲಭ್ಯ"

ವಿದೇಶದಲ್ಲಿ ನೆಲೆಸಿರುವ ಬಹಳಷ್ಟು ಅನಿವಾಸಿ ಕನ್ನಡಿಗರು ತಾಯ್ನಾಡಿಯಲ್ಲಿ, ಬಂಡವಾಳ ಹೂಡಿಕೆಯ ಜೊತೆಗೆ ಜ್ಞಾನ ಮತ್ತು ಅನುಭವವನ್ನು ರಾಜ್ಯದ ಅಭಿವೃದ್ಧಿಗೆ ವಿನಿಯೋಗಿಸಲು ಉತ್ಸುಕರಾಗಿದ್ದು, ಇವರನ್ನು ಪ್ರೋತ್ಸಾಹಿಸುವ ದೃಷ್ಟಿಯಿಂದ ಸರ್ಕಾರ ಮೊದಲ ಬಾರಿಗೆ ಅನಿವಾಸಿ ಕನ್ನಡಿಗರು ಬಂಡವಾಳ ಹೂಡಿಕೆಗೆ ನೂತನ ಕೈಗಾರಿಕಾ ನೀತಿಯಲ್ಲಿ ವಿಶೇಷ ಅವಕಾಶವನ್ನು ಮಾಡಿಕೊಡಲಾಗಿದೆ ಎಂದು ಅನಿವಾಸಿ ಭಾರತೀಯ ಸಮಿತಿಯ ಉಪಾಧ್ಯಕ್ಷರಾದ ವಿ.ಸಿ. ಪ್ರಕಾಶ್ ತಿಳಿಸಿದರು.

ಅವರು ಇಂದು ಅನಿವಾಸಿ ಭಾರತೀಯ ಸಮಿತಿಯ ಕಛೇರಿಯಲ್ಲಿ ನಡೆದ ನೂತನ ಕೈಗಾರಿಕಾ ನೀತಿಯಲ್ಲಿ ಅನಿವಾಸಿ ಕನ್ನಡಿಗರಿಗೆ ಒದಗಿಸಿರುವ ಸೌಲಭ್ಯಗಳ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿದ್ದರು.

ರಾಜ್ಯದಲ್ಲಿ ಕೈಗಾರಿಕಾ ಮತ್ತು ಆರ್ಥಿಕ ಅಭಿವೃದ್ಧಿಗೆ ಬಂಡವಾಳ ಹೂಡಲು ಮುಂದೆಬರುವ ಅನಿವಾಸಿ ಕನ್ನಡಿಗರ ಕೈಗಾರಿಕಾ ಪ್ರಸ್ತಾವನೆ, ಜಮೀನು ಮಂಜೂರಾತಿ, ರಿಯಾಯಿತಿ ಸೌಲಭ್ಯ ವಿಷಯಗಳನ್ನು ಶೀಘ್ರವಾಗಿ ಏಕಗವಾಕ್ಷಿ ಪದ್ಧತಿಯ ಮಾದರಿಯಲ್ಲಿ ಅನುಮೋದನೆ ನೀಡಲು "ಅನಿವಾಸಿ ಕನ್ನಡಿಗರ ಬಂಡವಾಳ ಹೂಡಿಕೆ ಪ್ರೋತ್ಸಾಹ ಕೇಂದ್ರ"ವನ್ನು 'ಕರ್ನಾಟಕ ಉದ್ಯೋಗ ಮಿತ್ರ' ಸಂಸ್ಥೆಯ ಸಹಯೋಗದೊಂದಿಗೆ ಶೀಘ್ರದಲ್ಲೇ ಪ್ರಾರಂಭಿಸಲು ನಿರ್ಣಯಿಸಲಾಯಿತು ಎಂದು ಉಪಾಧ್ಯಕ್ಷ ವಿ.ಸಿ. ಪ್ರಕಾಶ್ ನುಡಿದರು.

ವಿಫುಲ ಅವಕಾಶವಿರುವ ಅಭಿವೃದ್ಧಿ ಕ್ಷೇತ್ರಗಳಲ್ಲಿ ಬಂಡವಾಳ ಹೂಡಿಕೆಯನ್ನು ಅನಿವಾಸಿ ಕನ್ನಡಿಗರನ್ನು ಆಕರ್ಷಿಸುವ ಈ ನೂತನ ಕೈಗಾರಿಕಾ ನೀತಿ, ಅನಿವಾಸಿ ಕನ್ನಡಿಗರನ್ನು ಹೆಚ್ಚು ಆಕರ್ಷಿಸಲಿದೆ. ರಾಜ್ಯದ ಎರಡನೇ ಹಂತದ ನಗರಗಳಲ್ಲಿ ಬಂಡವಾಳ ಹೂಡಿಕೆ ಮಾಡುವಂತೆ ಉತ್ತೇಜಿಸುವುದರಿಂದ ಹಿಂದುಳಿದ ಪ್ರದೇಶಗಳ ಅಭಿವೃದ್ಧಿಗೂ ಇವರ ಕೊಡುಗೆ ಸಲ್ಲುತ್ತದೆ. ಈ ನಿಟ್ಟಿನಲ್ಲಿ ಅನಿವಾಸಿ ಭಾರತೀಯರ/ಅನಿವಾಸಿ ಕನ್ನಡಿಗರನ್ನು ಪ್ರೋತ್ಸಾಹಿಸಲು ಅವಕಾಶವನ್ನು ಕಲ್ಪಿಸಿದೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಶ್ರೀಮತಿ ಕೆ. ರತ್ನಪ್ರಭರವರು ತಿಳಿಸಿ, ಅನಿವಾಸಿ ಕನ್ನಡಿಗರ ಕೈಗಾರಿಕಾ ಪ್ರಸ್ತಾವನೆಗಳು, ಮಂಜೂರಾತಿ, ರಿಯಾಯಿತಿ ಸೌಲಭ್ಯಗಳನ್ನು ತ್ವರಿತವಾಗಿ ಇತ್ಯರ್ಥಗೊಳಿಸಲು ಇಲಾಖೆ ಬದ್ಧವಾಗಿದೆ ಎಂದು ತಿಳಿಸಿದರಲ್ಲದೇ, ಅನಿವಾಸಿ ಭಾರತೀಯ ಕೈಗಾರಿಕೋದ್ಯಮಿಗಳನ್ನು ಪ್ರೋತ್ಸಾಹಿಸುವ ದೃಷ್ಟಿಯಿಂದ ವಿಶೇಷವಾಗಿ ಕಾರ್ಯಾಗಾರವನ್ನು ಆಯೋಜಿಸುವ ನಿಟ್ಟಿನಲ್ಲಿ ಅನಿವಾಸಿ ಭಾರತೀಯ ಸಮಿತಿ ಮತ್ತು ಕರ್ನಾಟಕ ಉದ್ಯೋಗ ಮಿತ್ರ ಕಾರ್ಯೋನ್ಮುಖವಾಗುವಂತೆ ಸಲಹೆ ಮಾಡಿದರು.

ಅನಿವಾಸಿ ಭಾರತೀಯರು/ಅನಿವಾಸಿ ಕನ್ನಡಿಗರು, ರಾಜ್ಯದಲ್ಲಿ ಕೈಗಾರಿಕೋದ್ಯಮ ಕ್ಷೇತ್ರದಲ್ಲಿ ಬಂಡವಾಳ ಹೂಡಲು ಮುಂದೆ ಬರುವ ಕೈಗಾರಿಕೋದ್ಯಮಿಗಳಿಗೆ ನೂತನ ಕೈಗಾರಿಕಾ ನೀತಿಯನ್ವಯ ಬೀಜಧನ ನೀಡುವ ಅವಕಾಶವಿದ್ದು, ಇದರ ಉಪಯೋಗವನ್ನು ಪಡೆದುಕೊಳ್ಳುವ ಮೂಲಕ ರಾಜ್ಯದ ಕೈಗಾರಿಕಾ ಬೆಳವಣಿಗೆಯಲ್ಲಿ ಪಾಲ್ಗೊಳ್ಳುವಂತೆ ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗು ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ವಿ.ಪಿ. ಬಳಿಗಾರ್ ಸಭೆಯಲ್ಲಿ ತಿಳಿಸಿದ ಅವರು, ಬಂಡವಾಳ ಹೂಡಲು ಸಶಕ್ತ ಅನಿವಾಸಿ ಕನ್ನಡಿಗರ ಮಾಹಿತಿಯನ್ನು ಸಂಗ್ರಹಿಸುವ ಅಗತ್ಯವಿದೆ ಎಂದರು.

ಕರ್ನಾಟಕ ಉದ್ಯೋಗ ಮಿತ್ರದ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಎ. ಜಯಾನಂದ, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ಕಾರ್ಯದರ್ಶಿಗಳಾದ ಟಿ.ಪಿ. ವೆಂಕಟಸ್ವಾಮಿ ಹಾಗೂ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮದ ಪ್ರಧಾನ ವ್ಯವಸ್ಥಾಪಕರಾದ ನಿರ್ದೇಶಕರಾದ ಶ್ರೀ ರಾಮನಾರಾಯಣ ಗೌಡ, ಮಾಹಿತಿ ತಂತ್ರಜ್ಞಾನ ಇಲಾಖೆಯ ಉಪಕಾರ್ಯದರ್ಶಿಗಳಾದ ಶ್ರೀ ಎನ್.ಆರ್. ಪ್ರಭು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಜಂಟಿ ಕಾರ್ಯದರ್ಶಿಗಳಾದ ಶ್ರೀ ಸುರೇಶ್ ಬಿ. ಕೃಷ್ಣಪ್ಪನವರ್ ಸಭೆಯಲ್ಲಿ ಭಾಗವಹಿಸಿದ್ದರು. ಅನಿವಾಸಿ ಭಾರತೀಯ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾದ ಡಾ. ಕೆ. ಮುರಳಿಧರರವರು ಸ್ವಾಗತಿಸಿ ಅನಿವಾಸಿ ಭಾರತೀಯ ಸಮಿತಿಯ ಧ್ಯೇಯೋದ್ದೇಶಗಳನ್ನು ಸಭೆಗೆ ಮನವರಿಕೆ ಮಾಡಿದರು.